**All India Radio: Bangalore**
**Regional Bulletin In Kannada**
**24.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.08.2025 / 6.40 p.m.**
**<><><><>**

ಮುಖ್ಯಾಂಶಗಳು

೧. ಇಸ್ರೋದಿಂದ ಗಗನಯಾನ ಮಿಷನ್‌ಗೆ ಪೂರ್ವ ಸಿದ್ಧತೆ ; ಮೊದಲ ಸಮಗ್ರ ಏರ್‌ಡ್ರಾಪ್ ಯಶಸ್ವಿ ಪರೀಕ್ಷೆ

೨. ರಾಜ್ಯದ ತನಿಖಾ ಸಂಸ್ಥೆಗಳು ಆದರ್ಶವಾಗಿ ನಡೆದುಕೊಂಡು ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದೆ - ಎನ್. ಚಲುವರಾಯಸ್ವಾಮಿ ಮಾಹಿತಿ

೩. ಕೋಲಾರದ ನರಸಾಪುರದಲ್ಲಿಂದು ಸುಮಾರು ೧ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

೪. ಗದಗದ ಬೆಳೆ ಹಾನಿ ಪ್ರದೇಶಕ್ಕೆ ಸಚಿವ ಎಚ್.ಕೆ. ಪಾಟೀಲ್ ಭೇಟಿ ; ರೈತರಿಗೆ ಪರಿಹಾರ ಒದಗಿಸುವ ಭರವಸೆ

><><><><><><><><><

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ಗಗನಯಾನಕ್ಕಾಗಿ ವಿನ್ಯಾಸಗೊಳಿಸಲಾದ ಪ್ಯಾರಾಚೂಟ್ ಆಧರಿತ ಮೊದಲ ಸಮಗ್ರ ಏರ್ ಡ್ರಾಪ್ ಪರೀಕ್ಷೆ- ಎಲ್‌ಎಡಿಟಿ-೦೧ ಪ್ರದರ್ಶನವನ್ನು ಇಂದು ಯಶಸ್ವಿಯಾಗಿ ನಡೆಸಿದೆ. ಭಾರತದ ಮಹತ್ವಾಕಾಂಕ್ಷೆಯ ಚೊಚ್ಚಲ ಮಾನವ ಬಾಹ್ಯಾಕಾಶ ಹಾರಾಟ ಕಾರ್ಯಾಚರಣೆಯತ್ತ ಒಂದು ಪ್ರಮುಖ ಹೆಜ್ಜೆಯಾಗಿ, ಈ ಪ್ರದರ್ಶನ ನಡೆಸಲಾಗಿದೆ. ಗಗನಯಾತ್ರಿಗಳು ಭೂಮಿಗೆ ಸುರಕ್ಷಿತವಾಗಿ ಮರಳುವುದನ್ನು ಖಚಿತಪಡಿಸುವ ಸುರಕ್ಷತಾ ಕಾರ್ಯವಿಧಾನಗಳನ್ನು ತಿಳಿದುಕೊಳ್ಳಲು ಈ ಪರೀಕ್ಷೆಯು ನಿರ್ಣಾಯಕವಾಗಿದೆ. ಭಾರತೀಯ ವಾಯುಪಡೆ, ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ- ಡಿಆರ್‌ಡಿಒ, ಭಾರತೀಯ ನೌಕಾಪಡೆ ಮತ್ತು ಭಾರತೀಯ ಕರಾವಳಿ ಕಾವಲು ಪಡೆಗಳೊಂದಿಗೆ ಸಮನ್ವಯದಲ್ಲಿ ಈ ಪ್ರದರ್ಶನವನ್ನು ನಡೆಸಲಾಯಿತು. ಅಂತಿಮ ಮಾನವಸಹಿತ ಬಾಹ್ಯಾಕಾಶಯಾನಕ್ಕೆ ಮುನ್ನ ಇದೇ ರೀತಿಯ ೨ನೇ ಪರೀಕ್ಷೆ ನಡೆಸಲಾಗುವುದು ಹಾಗೂ ಮೊದಲನೇ ಮಾನವರಹಿತ ಗಗನಯಾನವನ್ನು ನಡೆಸಲಾಗುವುದು. ಈ ಮೊದಲ ಮಾನವರಹಿತ

ಗಗನಯಾನ ಮಿಷನ್ ಡಿಸೆಂಬರ್‌ನಲ್ಲಿ ನಡೆಯುವ ಸಾಧ್ಯತೆಯಿದ್ದು, ಇದರಲ್ಲಿ ರೊಬೋಟ್ 'ವ್ಯೋಮಮಿತ್ರ' ವನ್ನು ಬಳಸಲಾಗುವುದು.

><><><><><><><><

ಸಾರ್ವಜನಿಕ ನೋವಿಗೆ ಸ್ಪಂದಿಸುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯದಲ್ಲಿಂದು ನಡೆದ ಮೈಸೂರು ವಿಭಾಗಮಟ್ಟದ ಶಿಕ್ಷಕ ಪ್ರತಿನಿಧಿಗಳ ಸಮಾವೇಶ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ೭ ಕೋಟಿ ಕನ್ನಡಿಗರ ಪರವಾಗಿದೆ. ಯಾವುದೇ ನಿರ್ಣಯ ತೆಗೆದುಕೊಳ್ಳುವಾಗ ಕಾನೂನು ಮತ್ತು ಸಂವಿಧಾನದ ವ್ಯಾಪ್ತಿಯಲ್ಲಿ ತೆಗೆದುಕೊಳ್ಳಲಾಗುತ್ತದೆ. ಸಮಸ್ಯೆಗಳಿಗೆ ಹೋರಾಟ ಒಂದು ಪರಿಹಾರವಲ್ಲ ಎಂದು ಅಭಿಪ್ರಾಯಪಟ್ಟರು. ಪೋಷಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳ ಬದಲಿಗೆ ಸರ್ಕಾರಿ ಶಾಲೆಗಳಲ್ಲಿ ಸೇರಿಸಲು ಸರ್ಕಾರಿ ಶಾಲಾ ಶಿಕ್ಷಕರು ಜವಾಬ್ದಾರಿಯುತವಾಗಿ ಆಕರ್ಷಕವಾಗಿ ಹಾಗೂ ಪ್ರಮಾಣಿಕವಾಗಿ ಕೆಲಸ ನಿರ್ವಹಿಸಿ ಎಂದು ಸಚಿವರು ಶಿಕ್ಷಕರಿಗೆ ಕರೆ ನೀಡಿದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅನಾವಶ್ಯಕವಾಗಿ ಧರ್ಮಸ್ಥಳದಂತಹ ಧಾರ್ಮಿಕ ಕ್ಷೇತ್ರದ ಮೇಲೆ ಅನುಚಿತ ಅಭಿಪ್ರಾಯ ಮೂಡಿಸುವವರ ವಿರುದ್ಧ ತಮ್ಮ ಸರ್ಕಾರ ಕ್ರಮವನ್ನು ತೆಗೆದುಕೊಳ್ಳುತ್ತದೆ. ರಾಜ್ಯದ ತನಿಖಾ ಸಂಸ್ಥೆಗಳು ಆದರ್ಶವಾಗಿ ನಡೆದುಕೊಂಡು, ದಕ್ಷತೆಯಿಂದ ಕಾರ್ಯ ನಿರ್ವಹಿಸುತ್ತಿವೆ ಎಂದು ಹೇಳಿದ್ದಾರೆ.

**ಧ್ವನಿ : ಚಲುವರಾಯಸ್ವಾಮಿ (೩೧ ಸೆಕೆಂಡ್‌ಗಳು)**

><><><><><><><><

ಬಿಹಾರದಲ್ಲಿ ನಡೆದ ಮತ ಅಧಿಕಾರ ಯಾತ್ರೆ ದೇಶದ ರಾಜಕೀಯಕ್ಕೆ ಹೊಸ ತಿರುವು ನೀಡಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಬಿಹಾರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕೈಗೆತ್ತಿಕೊಂಡಿರುವ ವಿಚಾರಗಳು, ಕರ್ನಾಟಕದಿಂದ ಬಿಹಾರದವರೆಗೆ ದೇಶದ ಚರ್ಚೆಯ ವಿಷಯವಾಗಿದೆ ಎಂದರು. ಅವರು, ಸಾರ್ವಜನಿಕರಿಗೆ ಸಂವಿಧಾನ ನೀಡಿರುವ ನ್ಯಾಯವನ್ನು ಒದಗಿಸಲು ಹೋರಾಟ ನಡೆಸುತ್ತಿದ್ದಾರೆ. ಸುಪ್ರೀಂಕೋರ್ಟ್ ಎಲ್ಲರಿಗೂ ತಮ್ಮ ಮತದಾನ ಹಕ್ಕು ಚಲಾಯಿಸಲು ಅವಕಾಶ ನೀಡಿದೆ. ಅದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

**ಧ್ವನಿ : ಡಿ.ಕೆ. ಶಿವಕುಮಾರ್ (೪೧ ಸೆಕೆಂಡ್‌ಗಳು)**

><><><><><><><><

ಕೋಲಾರದ ನರಸಾಪುರದ ಅಭಿವೃದ್ಧಿಗೆ ೩೦ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ಶಾಸಕ ಕೊತ್ತೂರು ಮಂಜುನಾಥ್ ಹೇಳಿದ್ದಾರೆ. ನರಸಾಪುರ ಗ್ರಾಮದಲ್ಲಿಂದು ಸುಮಾರು ೧ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ರಸ್ತೆ ಹಾಗೂ ಚರಂಡಿಗಳ ಅಭಿವೃದ್ಧಿಗೆ ಕಾಮಗಾರಿ ಪ್ರಗತಿಯಲ್ಲಿದೆ. ಮುಂದಿನ ದಿನಗಳಲ್ಲಿ ಮತ್ತೊಂದು ಕೋಟಿ ರೂಪಾಯಿ ಅನುದಾನಕ್ಕೆ ಬೇಡಿಕೆ ಇಡಲಾಗಿದ್ದು, ಈ ಅನುದಾನ ಬಿಡುಗಡೆಯಾದಲ್ಲಿ ಗ್ರಾಮದ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಳ್ಳಲಿವೆ. ಕಾಮಗಾರಿಯ ಗುಣಮಟ್ಟ ಕಾಪಾಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

><><><><><><><><

ಗದಗ ತಾಲ್ಲೂಕಿನ ಬಿಂಕದಕಟ್ಟಿ ಗ್ರಾಮದ ಬೆಳೆ ಹಾನಿ ಪ್ರದೇಶಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಇಂದು ಭೇಟಿ ನೀಡಿ ಪರಿಸ್ಥಿತಿಯನ್ನು  ಪರಿಶೀಲಿಸಿದರು. ಅಧಿಕ ಮಳೆಯಿಂದ ಹೊಲದಲ್ಲಿ ಹೆಸರು ಬೆಳೆ ಹಾಳಾದ ದೃಶ್ಯವನ್ನು ಕಂಡ ಸಚಿವರು, ರೈತರಿಗೆ ತಕ್ಷಣ ಪರಿಹಾರ ಒದಗಿಸುವ ಭರವಸೆ ನೀಡಿ, ಈ ಸಂದರ್ಭದಲ್ಲಿ ಅವರು ಅಧಿಕಾರಿಗಳಿಗೆ ನಿಖರ ಸಮೀಕ್ಷೆ ನಡೆಸಿ ಹಾನಿಗೊಳಗಾದ ಪ್ರತಿ ಎಕರೆಯ ಲೆಕ್ಕವನ್ನು ದಾಖಲಿಸುವಂತೆ ಸೂಚನೆ ನೀಡಿದರು. ರೈತರ ಕಷ್ಟವನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ, ಅವರಿಗೆ ಸರ್ಕಾರದಿಂದ ಎಲ್ಲಾ ರೀತಿಯ ಸಹಾಯ ದೊರೆಯಬೇಕು ಎಂದು  ತಿಳಿಸಿದರು. ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ, ಹಾನಿ ಅಂಕಿ-ಅಂಶಗಳನ್ನು ಸರಿಯಾಗಿ ಸಂಗ್ರಹಿಸುವಂತೆ ಹಾಗೂ ರೈತರಿಗೆ ಶೀಘ್ರ ಪರಿಹಾರ ಒದಗಿಸಲು ತುರ್ತು ಕ್ರಮ ಕೈಗೊಳ್ಳುವಂತೆ  ಸಚಿವ ಎಚ್.ಕೆ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದರು.

><><><><><><><><

ಹಿಂದೂಗಳ ಪವಿತ್ರ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿಗಳ ಕುಟುಂಬದ ವಿರುದ್ಧ ಯೂಟ್ಯೂಬ್ ಮೂಲಕ ಅಪಪ್ರಚಾರ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಯೂಟ್ಯೂಬರ್ ಮೊಹಮ್ಮದ್ ಸಮೀರ್ ಪೊಲೀಸರ ಮುಂದೆ ತಮ್ಮ ಮೂರು ವಕೀಲರೊಂದಿಗೆ ವಿಚಾರಣೆಗೆ ಹಾಜರಾಗಿದ್ದಾರೆ. ಸಮೀರ್ ಎಂ.ಡಿ ವಿರುದ್ಧ ಬೆಳ್ತಂಗಡಿ ಪೊಲೀಸ್ ಠಾಣೆಗೆ ದೂರು ದಾಖಲಾಗಿತ್ತು. ಆದರೆ

ಬಂಧನಕ್ಕೂ ಮೊದಲು ನಿರೀಕ್ಷಣಾ ಜಾಮೀನು ಪಡೆದಿದ್ದ ಸಮೀರ್‌ಗೆ ಎರಡು ದಿನದಲ್ಲಿ ವಿಚಾರಣೆಗೆ ಹಾಜರಾಗಲು ಕೋರ್ಟ್ ಸೂಚಿಸಿತ್ತು. ಹೀಗಾಗಿ ಪೊಲೀಸರು ಬಂಧನ ಕಾರ್ಯಾಚರಣೆ ನಿಲ್ಲಿಸಿದ್ದರು. ಇಂದು ಕೋರ್ಟ್ ನೀಡಿದ ಗಡುಗು ಅಂತ್ಯಗೊಳ್ಳುತ್ತಿದ್ದಂತೆ ಸಮೀರ್ ಎಂಡಿ ಬೆಳ್ತಂಗಡಿ ಪೊಲೀಸರ ಮುಂದೆ ಹಾಜರಾಗಿದ್ದಾರೆ.

><><><><><><><><

ದಾವಣಗೆರೆ ಜಿಲ್ಲಾ ವ್ಯಾಪ್ತಿಯ ಗಣಿಭಾದಿತ ಪ್ರದೇಶದಲ್ಲಿನ ವಿಶೇಷಚೇತನರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ವಿಶೇಷಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ. ಯೋಜನೆಯಡಿ ಜೆರಾಕ್ಸ್ ಯಂತ್ರ ಮತ್ತು ದೈಹಿಕ ವಿಶೇಷಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ನೀಡಲಾಗುವುದು. ಆಸಕ್ತ ವಿಶೇಷಚೇತನರು ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಸಂಪರ್ಕಿಸಿ ಸೆಪ್ಟೆಂಬರ್ ೧೫ ರೊಳಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಡಾ.ಕೆ.ಕೆ.ಪ್ರಕಾಶ್ ತಿಳಿಸಿದ್ದಾರೆ.

><><><><><><><><

ಬಿಎಲ್‌ಡಿ ಸೌಹಾರ್ದ ಸಹಕಾರಿ ಬ್ಯಾಂಕ್‌ನ ಪ್ರಥಮ ಬೆಂಗಳೂರು ಶಾಖೆಗೆ ಇಂದು ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗಾ ಸ್ವಾಮೀಜಿ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಚಾಲನೆ ನೀಡಿದ್ದಾರೆ. ಶಾಖೆಯ ಉದ್ಘಾಟನೆ ನೆರವೇರಿಸಿ ಮಾತನಾಡಿದ ರಾಮಲಿಂಗಾರೆಡ್ಡಿ, ಬ್ಯಾಂಕಿಂಗ್ ಕ್ಷೇತ್ರ ಸರಿಯಾದ ಠೇವಣಿ, ಸಾಲ ನೀಡುವಿಕೆ ಮತ್ತು ಸಾಲ ವಸೂಲಾತಿಗಳ ಆಧಾರದ ಮೇಲೆ ನಡೆಯುತ್ತದೆ. ಬಿಎಲ್‌ಡಿ ಸೌಹಾರ್ದ ಬ್ಯಾಂಕ್ ಕೇವಲ ಮೂರು ವರ್ಷಗಳಲ್ಲಿ ೧೧ ಶಾಖೆಗಳನ್ನು ತೆರೆದಿರುವುದು ಶ್ಲಾಘನೀಯ ಎಂದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಚಿವ ಎಂ.ಬಿ. ಪಾಟೀಲ್ ಮಾತನಾಡಿ, ಎಚ್ಚರಿಕೆಯಿಂದ ಮತ್ತು ಪ್ರಮಾಣಿಕವಾಗಿ ಕೆಲಸ ನಿರ್ವಹಿಸಿದಾಗ ಮಾತ್ರ ಜನರ ವಿಶ್ವಾಸ ಗಳಿಸಲು ಸಾಧ್ಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸನ್ಮಾನಿಸಲಾಯಿತು.

><><><><><><><><

ಕೋಲಾರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ೨೦೦೬-೦೭ನೇ ಸಾಲಿನ ಭಾಗ್ಯಲಕ್ಷ್ಮಿ ಬಾಂಡ್ ಪಡೆದ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಾವತಿಸಲು ಬಾಕಿಯಿರುವ ಪ್ರಸ್ತಾವನೆಗಳನ್ನು ಅಕ್ಟೋಬರ್ ೩೧ರವರೆಗೆ ನೋಂದಾಯಿಸಿಕೊಳ್ಳಬಹುದು. ೨೦೦೬-೦೭ ರಿಂದ

೨೦೧೯-೨೦ರ ವರೆಗೆ ಬಾಂಡ್ ಸೌಲಭ್ಯ ಪಡೆದು ೧೮ ವರ್ಷ ಪೂರೈಸಿರುವಂತಹ ಫಲಾನುಭವಿಗಳಿಗೆ ಪರಿಪಕ್ವ ಮೊತ್ತವನ್ನು ಎಲ್.ಐ.ಸಿ ಸಂಸ್ಥೆಯಿಂದ ನೇರವಾಗಿ ಫಲಾನುಭವಿಗಳ ಖಾತೆಗೆ ಪಾವತಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಇದೊಂದು ನಿರಂತರ ಪ್ರಕ್ರಿಯೆಯಾಗಿದೆ. ಭಾಗ್ಯಲಕ್ಷ್ಮಿ ಬಾಂಡ್ ಪಡೆದು ೧೮ವರ್ಷ ಪೂರ್ಣಗೊಂಡಿರುವಂತಹ ಫಲಾನುಭವಿಗಳು ತಮ್ಮ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

><><><><><><><><

ರಕ್ತದಾನವು ಮಾನವೀಯತೆ ಹಾಗೂ ಸತ್ಕಾರ್ಯದ ಕೆಲಸವಾಗಿದ್ದು, ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿ ಶರೀರವನ್ನು ಹಲವಾರು ಕಾಯಿಲೆಗಳಿಂದ ದೂರಿಡುವಲ್ಲಿ ಸಹಕಾರಿಯಾಗಲಿದೆ ಎಂದು ಚಿಕ್ಕಮಗಳೂರು ವಿಧಾನ ಸಭಾ ಕ್ಷೇತ್ರದ ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದ್ದಾರೆ. ಚಿಕ್ಕಮಗಳೂರು ನಗರದ ರೋಟರಿ ಸಭಾಂಗಣದಲ್ಲಿಂದು ವಿಶ್ವ ಬಂಧುತ್ವ ದಿನದ ಪ್ರಯುಕ್ತ ಪ್ರಜಾಪಿತ ಬ್ರಹ್ಮ ಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಏರ್ಪಡಿಸಿದ್ಧ ಬೃಹತ್ ರಕ್ತದಾನ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

><><><><><><><><